ಮಂಗಳವಾರ 26.08.2025 ಬೆಂಗಳೂರು ಬೆಲೆ: 5ರೂ, 2 ಪುಟಗಳು ಸಂಪುಟ 01 - ಸಂಚಿಕೆ 33

Digital Varthe Kannada Daily Volume 01 - Issue 33 Tuesday 26.08.2025 Price: 5/- Rs 2 Pages

# ಡಿಜಿಟಲ್ ವಾರ್ತೆ

RNI: KNKAN/25/A1348 ಕನ್ನಡಿಗರ ಶಕ್ತಿ ಕನ್ನಡ ದಿನಪತ್ರಿಕೆ

www.digitalvarthe.com

ಅಭಿಷೇಕ್ ಚಿಕ್ಕಮಾರನಹಳ್ಳಿ
ಸಂಪಾದಕರು

ಪುರುಷೋತ್ತಮ್ ಬಿ.ಹೆಚ್
ವ್ಯವಸ್ಥಾಪಕರು

digitalvarthe@gmail.com

## ಗ್ಯಾಸ್ ಸಿಲಿಂಡರ್ ಸ್ಫೋಟ: ನೊಂದ ಕುಟುಂಬಕ್ಕೆ ಆರ್ಥಿಕ ನೆರವು ನೀಡಿದ ಮಿತ್ರ ಫೌಂಡೇಷನ್



### ಮನೆ ಸುಟ್ಟು ಲಕ್ಷಾಂತರ ಮೌಲ್ಯದ ಸಾಮಗ್ರಿಗಳು ಸುಟ್ಟು ಕರಕಲಾಗಿದ್ದವು

ಕೃಷ್ಣರಾಜಪೇಟೆ: ತಾಲೂಕಿನ ಬೂಕನಕೆರೆ ಹೋಬಳಿಯ ಬಲ್ಲೇನಹಳ್ಳಿ ಗ್ರಾಮದ ದೇವರಾಜು ಅವರಿಗೆ ಸೇರಿದ ಮನೆಯಲ್ಲಿ ಇತ್ತೀಚೆಗೆ ಗ್ಯಾಸ್ ಸಿಲಿಂಡರ್ ಸ್ಫೋಟಗೊಂಡು ಮನೆಯು ಬೆಂಕಿಯಿಂದ ಭಾಗಶಃ ಸುಟ್ಟು ಹೋಗಿ ಲಕ್ಷಾಂತರ ರೂಪಾಯಿಗಳಷ್ಟು ನಷ್ಟವಾಗಿತ್ತು. ಘಟನಾ ಸ್ಥಳಕ್ಕೆ ಮಿತ್ರ ಫೌಂಡೇಷನ್ ಅಧ್ಯಕ್ಷರು ಹಾಗೂ ಸಮಾಜ ಸೇವಕರಾದ ವಿಜಯ್ ರಾಮೇಗೌಡ ಅವರು ಬೇಟಿ ನೀಡಿ ಆರ್ಥಿಕ ನೆರವು ನೀಡಿ, ನೊಂದ ಕುಟುಂಬಕ್ಕೆ ಸಾಂತ್ವನ ಹೇಳಿದರು.

ಈ ಸಂದರ್ಭದಲ್ಲಿ ಹಾಜರಿದ್ದ ಬಲ್ಲೇನಹಳ್ಳಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಬಿ.ಸಿ.ರಮೇಶ್ ಮಾತನಾಡಿ ತಾಲ್ಲೂಕಿನಲ್ಲಿ ಕಾಂಗ್ರೆಸ್ ಪಕ್ಷದ ಸಂಘಟನೆಗೆ ತಮ್ಮ ಆದ ರೀತಿಯಲ್ಲಿ ಸಹಾಯ, ಸಹಕಾರ ಮಾಡುತ್ತಿರುವ ಬೂಕನಕೆರೆ ಗ್ರಾಮದ ಸುಪುತ್ರ,ಮಿತ್ರ,ಫೌಂಡೇಷನ್ ಅಧ್ಯಕ್ಷರಾದ ವಿಜಯ್ ರಾಮೇಗೌಡ ಅವರು ಸಮಾಜ ಸೇವೆಯ ಮೂಲಕ ತಾಲ್ಲೂಕಿನಲ್ಲಿ ಹೊಸ ಇತಿಹಾಸವನ್ನು ನಿರ್ಮಿಸಿದ್ದಾರೆ. ದೇವಾಲಯಗಳ ಅಭಿವೃದ್ಧಿ ಆರ್ಥಿಕ ನೆರವು ನೀಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ನೂರಾರು ದೇವಾಲಯಗಳು ಜೀರ್ಣೋದ್ಧಾರ ಆಗುವಂತೆ ತಮ್ಮ ಸಹಕಾರ ನೀಡಿದ್ದಾರೆ.

ಜೊತೆಗೆ ಬಡ ವಿದ್ಯಾರ್ಥಿಗಳಿಗೆ ಆರ್ಥಿಕ ನೆರವು, ಕ್ರೀಡಾಕೂಟಗಳು. ನಾಟಕಗಳು, ಹಬ್ಬ ಹರಿದಿನಗಳ ಸಾಂಸ್ಕೃತಿಕ ಚಟುವಟಿಕೆಗಳಿಗೆ ತಮ್ಮ ಮಿತ್ರ ಫೌಂಡೇಷನ್ ವತಿಯಿಂದ ಆರ್ಥಿಕ ನೆರವು ನೀಡುವ ಮೂಲಕ ತಾಲ್ಲೂಕಿನಲ್ಲಿ ತಮ್ಮದೇ ಆದ ಅಭಿಮಾನಿ ಬಳಗವನ್ನು ಸಂಪಾದನೆ ಮಾಡಿದ್ದಾರೆ. ಹಾಗಾಗಿ ಆ ದೇವರು ವಿಜಯ್ ರಾಮೇಗೌಡರಿಗೆ ಇನ್ನಷ್ಟು ಸೇವೆಯನ್ನು ಮಾಡಲು ಆಯಸ್ಸು ಆರೋಗ್ಯ ಹಾಗೂ ರಾಜಕೀಯ ಶಕ್ತಿಯನ್ನು ನೀಡಲಿ ಎಂದು ಆಶಯ ವ್ಯಕ್ತಪಡಿಸಿದ್ದಾರೆ.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯರಾದ ಕೋಡಿಮಾರನಹಳ್ಳಿ ಎಲ್. ದೇವರಾಜು, ಬಲ್ಲೇನಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಡಿ.ವಿ.ಕುಮಾರ್ , ದಾನಿಗಳು ಹಾಗೂ ವಿದ್ಯುತ್ ಹಾಗೂ ಸಿವಿಲ್ ಗುತ್ತಿಗೆದಾರ ಬಿ.ಎಸ್. ರಾಮು, ಗ್ರಾ.ಪಂ. ಮಾಜಿ ಅಧ್ಯಕ್ಷ ನಾಗರಾಜು, ಗ್ರಾ.ಪಂ.ಮಾಜಿ ಸದಸ್ಯ ಮಹಾದೇವ್, ಡೇರಿ ಮಾಜಿ ಅಧ್ಯಕ್ಷ ಸ್ವಾಮಿಗೌಡ, ಸೇರಿದಂತೆ ಇತರರು ಹಾಜರಿದ್ದರು.

## ಹಬ್ಬದ ಮುನ್ನ ದೇವರ ಮೂರ್ತಿ ಕಳವು – ಸ್ಥಳೀಯರಲ್ಲಿ ಆಕ್ರೋಶ



### ಗಣೇಶನನ್ನು ಕದ್ದು ಕೂರಿಸಿ ಸಾಧಿಸುವುದಾದರೂ ಏನಿದೆ ಎಂದು ಆಕ್ರೋಶ!?

ಶ್ರೀರಂಗಪಟ್ಟಣ: ಕಲಿಗಾಲದಲ್ಲಿ ದೇವರನ್ನು ಬಿಡದ ಕಳ್ಳರು ಮತ್ತೊಮ್ಮೆ ತಮ್ಮ ನಖರು ತೋರಿಸಿದ್ದಾರೆ. ರಾತ್ರೋ ರಾತ್ರಿ ಖಾಸಗಿ ಬಸ್ ನಿಲ್ದಾಣದ ಬಳಿ ಇಡಲಾಗಿದ್ದ ಗಣೇಶನ ಮೂರ್ತಿಯನ್ನು ಕಳ್ಳರು ಹೊತ್ತೊಯ್ದ ಘಟನೆ ಸ್ಥಳೀಯರಲ್ಲಿ ಆಕ್ರೋಶ ಮತ್ತು ಅಚ್ಚರಿಯನ್ನುಂಟುಮಾಡಿದೆ. ಶ್ರೀರಂಗಪಟ್ಟಣದ ಖಾಸಗಿ ಬಸ್ ನಿಲ್ದಾಣದಲ್ಲಿ ಗಣೇಶ ಚತುರ್ಥಿಯ ಹಬ್ಬದ ಅಂಗವಾಗಿ ಮಾರಾಟ ಮಾಡಲು ಇಡಲಾಗಿದ್ದ ಮೂರ್ತಿಗಳ ಪೈಕಿ 15 ಸಾವಿರ ರೂಪಾಯಿ ಮೌಲ್ಯದ ಗಣೇಶ ಮೂರ್ತಿ ಕಳುವಾಗಿದೆ. ಈ ಕಳ್ಳತನ ಸೋಮವಾರ ಮಧ್ಯರಾತ್ರಿ ನಡೆದಿದೆ.

ಘಟನೆಯಲ್ಲಿ ತೀವ್ರ ಬೇಸರ ಗೊಂಡಿರುವವರು ಶ್ರೀರಂಗಪಟ್ಟಣದ ಶ್ರೀನಿವಾಸ್, ಅವರು ಕಳೆದ 40 ವರ್ಷಗಳಿಂದ ಗಣೇಶ ಮೂರ್ತಿಗಳನ್ನು ತಯಾರಿಸಿ ಮಾರಾಟ ಮಾಡುತ್ತಿದ್ದರು. ಪ್ರತೀ ವರ್ಷ ಹಬ್ಬದ ಸನ್ನಿವೇಶದಲ್ಲಿ ಶ್ರಮಪಟ್ಟು ತಯಾರಿಸಿದ ಗಣಪತಿಗಳನ್ನು ಸ್ಥಳೀಯ ಮಾರುಕಟ್ಟೆಯಲ್ಲಿ ಮಾರಾಟ ಮಾಡುತ್ತಿದ್ದರು. ಆದರೆ, ಈ ಬಾರಿ ತಯಾರಿಸಿದ ಮೂರ್ತಿಗಳ ಪೈಕಿ ಒಂದು ದುಬಾರಿ ಮೂರ್ತಿ ಕಳ್ಳತನವಾಗಿದ್ದು, ಅವರು ಖಿನ್ನತೆ ವ್ಯಕ್ತಪಡಿಸಿದ್ದಾರೆ.

“ಗಣಪತಿಯನ್ನು ಕದ್ದು ಕೂರಿಸಿಕೊಂಡು ಯಾರಾದರೂ ಸಾಧಿಸುವುದೇನು?” ಎಂದು ಮಾಲೀಕ ಶ್ರೀನಿವಾಸ್ ನೋವು ವ್ಯಕ್ತಪಡಿಸಿದ್ದಾರೆ. ದೇವರ ಮೂರ್ತಿಯನ್ನೇ ಕದ್ದುಕೊಂಡು ಹೋಗುವ ಪರಿಸ್ಥಿತಿಯನ್ನು ಕಂಡ ಸ್ಥಳೀಯರು ಕೂಡಾ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದು, ಕಳ್ಳರನ್ನು ಪತ್ತೆ ಮಾಡಿ ಕಠಿಣ ಶಿಕ್ಷೆ ನೀಡಬೇಕೆಂದು ಆಗ್ರಹಿಸಿದ್ದಾರೆ.

ಈ ಸಂಬಂಧ ಶ್ರೀರಂಗಪಟ್ಟಣ ಟೌನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಕಳ್ಳತನ ಮಾಡಿದವರ ಪತ್ತೆಗೆ ಪೊಲೀಸರು ಸಿಸಿಟಿವಿ ದೃಶ್ಯಾವಳಿ ಹಾಗೂ ಶೋಧ ಕಾರ್ಯಾಚರಣೆ ಕೈಗೊಂಡಿದ್ದಾರೆ.

## ಕಾರುಗಳ ಬೆಲೆಯಲ್ಲಿ ಆಗಲಿದೆ ಭಾರಿ ಇಳಿಕೆ

### ವಾಹನ ಉದ್ಯಮಕ್ಕೆ ನಷ್ಟವನ್ನು ತಪ್ಪಿಸಲು ಹೊಸ ಜಿಎಸ್‌ಟಿ ಪ್ಲಾನ್

ನವದೆಹಲಿ: ಜಿಎಸ್ ಟಿ ಸ್ಲ್ಯಾಬ್ ಗಳ ಪರಿಷ್ಕರಣೆಯಲ್ಲಿ ಕಾರುಗಳ ಮೇಲಿನ ಜಿಎಸ್ ಟಿ ಕಡಿಮೆಯಾಗುವ ನಿರೀಕ್ಷೆ ಇದೆ. ಮತ್ತೊಂದೆಡೆ ಲಾಭದಾಯಕ ಹಬ್ಬದ ಅವಧಿಯಲ್ಲಿ ವಾಹನಗಳ ಬೆಲೆ ಕಡಿತದ ನಿರೀಕ್ಷೆಯ ನಡುವೆ ಗ್ರಾಹಕರು ಖರೀದಿಗಳನ್ನು ಮುಂದೂಡುತ್ತಿದ್ದಾರೆ. ಇದರ ಪರಿಣಾಮದಿಂದ ವಾಹನದ ಉದ್ಯಮಕ್ಕೆ ನಷ್ಟ ಉಂಟಾಗುತ್ತಿದ್ದು, ನಷ್ಟವನ್ನು ತಪ್ಪಿಸಲು ಹೊಸ ಜಿಎಸ್‌ಟಿ ರಚನೆಯನ್ನು ಆದಷ್ಟು ಬೇಗ ಜಾರಿಗೆ ತರುವಂತೆ ಆಟೋಮೋಟಿವ್ ಡೀಲರ್‌ಗಳ ಸಂಸ್ಥೆ ಎಫ್‌ಎಡಿಎ ಕೋರಿದೆ.

ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅಧ್ಯಕ್ಷತೆಯ ಉನ್ನತ ಅಧಿಕಾರದ ಜಿಎಸ್‌ಟಿ ಕೌನ್ಸಿಲ್ ಸೆಪ್ಟೆಂಬರ್ 3-4 ರಂದು ಎರಡು-ಸ್ಲ್ಯಾಬ್ ತೆರಿಗೆಗೆ ಬದಲಾಯಿಸುವ ಬಗ್ಗೆ ಚರ್ಚಿಸಲು ಸಭೆ ಸೇರಲಿದೆ. ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಅವರಿಗೆ ಬರೆದ ಪತ್ರದಲ್ಲಿ, ಆಟೋಮೊಬೈಲ್ ಡೀಲರ್‌ಗಳ ಸಂಘಗಳ ಒಕ್ಕೂಟ (ಎಫ್‌ಎಡಿಎ) ಈ ಸಭೆ ಹಾಗೂ, ಜಿ ಎಸ್ ಟಿ ಪರಿಷ್ಕರಣೆಯ ಕುರಿತಂತೆ ನೀಡಲಾಗಿರುವ ಹೇಳಿಕೆ ತಳಮಟ್ಟದಲ್ಲಿ ಸವಾಲಿನ ಪರಿಸ್ಥಿತಿಯನ್ನು ಸೃಷ್ಟಿಸಿದೆ ಎಂದು ಹೇಳಿದೆ.

ಮರು-ಕೆಲಸದ ಜಿಎಸ್‌ಟಿ ರಚನೆಯ ಆರಂಭಿಕ ಅನುಷ್ಠಾನಕ್ಕೆ ಎಫ್‌ಎಡಿಎ ಕೋರಿದೆ. “ಪ್ರಮುಖ ಹಬ್ಬಗಳ ಆರಂಭದ ಮೊದಲು ತರ್ಕಬದ್ಧಗೊಳಿಸುವ ಕ್ರಮಗಳನ್ನು ಜಾರಿಗೆ ತರಲು ಜಿಎಸ್‌ಟಿ ಕೌನ್ಸಿಲ್ ಸಭೆಯನ್ನು ಮುಂಚಿತವಾಗಿ ನಿಗದಿಪಡಿಸಬೇಕು ಎಂದು ನಾವು ವಿನಂತಿಸುತ್ತೇವೆ. ಇದು ದೀಪಾವಳಿಯ ಸುತ್ತಲೂ ಮಾತ್ರ ಬೇಡಿಕೆಯನ್ನು ಕುಗ್ಗಿಸುವ ಬದಲು, ಋತುವಿನಾದ್ಯಂತ ಬೇಡಿಕೆಯನ್ನು ಹೆಚ್ಚಿಸುತ್ತದೆ. ಇದರಿಂದಾಗಿ ಗ್ರಾಹಕರ ಭಾವನೆ ಮತ್ತು ಉದ್ಯಮದ ಸ್ಥಿತಿ ಎರಡನ್ನೂ ರಕ್ಷಿಸುವ ಕ್ರಮ ಕೈಗೊಳ್ಳಬೇಕು” ಎಂದು ಉದ್ಯಮ ಸಂಸ್ಥೆ ಹೇಳಿದೆ.

ವಿತರಕರ ಮೇಲೆ ಅನಗತ್ಯ ಒತ್ತಡವನ್ನು ತಡೆಗಟ್ಟಲು ಮತ್ತು ವ್ಯವಹಾರ ನಿರಂತರತೆಯನ್ನು ಖಚಿತಪಡಿಸಿಕೊಳ್ಳಲು ಮಧ್ಯಂತರ ಹಂತದಲ್ಲಿ 30-45 ದಿನಗಳವರೆಗೆ ಕಂತು ಅವಧಿಗಳನ್ನು ವಿಸ್ತರಿಸಲು ಬ್ಯಾಂಕುಗಳು ಮತ್ತು ಎನ್‌ಬಿಎಫ್‌ಸಿಗಳಿಗೆ ನಿರ್ದೇಶನವನ್ನು ಸಹ ಅದು ಕೋರಿದೆ. ಮುಂಬರುವ ಹಬ್ಬಗಳಾದ ಓಣಂ (ಆಗಸ್ಟ್ 26), ಗಣೇಶ ಚತುರ್ಥಿ (ಆಗಸ್ಟ್ 27), ಮತ್ತು ನವರಾತ್ರಿ ಮತ್ತು ದೀಪಾವಳಿ (ಅಕ್ಟೋಬರ್ 18-23) ನಿರೀಕ್ಷೆಯಲ್ಲಿ ಭಾರತದಾದ್ಯಂತದ ಡೀಲರ್‌ಗಳು ಪ್ರಸ್ತುತ ದಾಸ್ತಾನು ನಿರ್ಮಿಸುತ್ತಿದ್ದಾರೆ ಎಂದು ಉದ್ಯಮ ಸಂಸ್ಥೆ ಗಮನಿಸಿದೆ.

“ಆದಾಗ್ಯೂ, ಜಿಎಸ್‌ಟಿ ಸ್ಲ್ಯಾಬ್ ಗಳ ಬದಲಾವಣೆಯ ಕುರಿತ ಘೋಷಣೆಯ ನಂತರ, ಗ್ರಾಹಕರು ತಮ್ಮ ಖರೀದಿಗಳನ್ನು ಮುಂದೂಡುತ್ತಿದ್ದಾರೆ ಮತ್ತು ಹೊಸ ದರಗಳ ಬಗ್ಗೆ ವಿತರಕರನ್ನು ಸ್ಪಷ್ಟವಾಗಿ ಕೇಳುತ್ತಿದ್ದಾರೆ. ಈ ಮುಂದೂಡಿಕೆಯು ಪ್ರಮುಖ ಹಬ್ಬದ ಮಾರಾಟಗಳನ್ನು ವೈಟ್‌ವಾಶ್ ಅವಧಿಯನ್ನಾಗಿ ಪರಿವರ್ತಿಸುವ ಅಪಾಯವನ್ನುಂಟುಮಾಡುತ್ತದೆ. ಹೊಸ ಜಿಎಸ್‌ಟಿ ಜಾರಿಯ ನಂತರ ದೀಪಾವಳಿಯ ಸಮಯದಲ್ಲಿ ಮಾತ್ರ ಬೇಡಿಕೆ ಸಾಕಾರಗೊಳ್ಳುತ್ತದೆ” ಎಂದು ಅದು ಹೇಳಿದೆ.



## ಬಾನು ಮುಷ್ತಾಕ್‌ರಿಂದ ದಸರಾ ಉದ್ಘಾಟನೆ: ಸರ್ಕಾರದ ನಿರ್ಧಾರ ಸ್ವಾಗತಿಸಿದ ಯದುವೀರ್

### ಕನ್ನಡ ಭಾಷೆ ಮತ್ತು ಸಾಹಿತ್ಯಕ್ಕೆ ಬಾನು ಮುಷ್ತಾಕ್ ನೀಡಿದ ಕೊಡುಗೆ ಅಪಾರ





ಕೊಡಗು: ರಾಜ್ಯ ಸರ್ಕಾರ ಈ ಬಾರಿ ವಿಶ್ವವಿಖ್ಯಾತ ಮೈಸೂರು ದಸರಾ ಉದ್ಘಾಟನೆ ಪ್ರತಿಷ್ಠಿತ ಬೂಕರ್ ಪ್ರಶಸ್ತಿ ವಿಜೇತ ಸಾಹಿತಿ ಬಾನು ಮುಷ್ತಾಕ್ ಅವರನ್ನು ಆಯ್ಕೆ ಮಾಡಿದ್ದು, ಇದು ಆಡಳಿತರೂಢ ಕಾಂಗ್ರೆಸ್ ಹಾಗೂ ಪ್ರತಿಪಕ್ಷ ಬಿಜೆಪಿ ನಡುವೆ ತೀವ್ರ ವಾಕ್ಸಮರಕ್ಕೆ ಕಾರಣವಾಗಿದೆ. ಬಾನು ಮುಷ್ತಾಕ್ ದಸರಾ ಉದ್ಘಾಟನೆಗೆ ತೀವ್ರ ಆಕ್ಷೇಪ ವ್ಯಕ್ತಪಡಿಸಿರುವ ಬಿಜೆಪಿ, ಹಿಂದೂ ಧರ್ಮವನ್ನು ಗೌರವಿಸುವವರಿಂದ ಮೈಸೂರು ದಸರಾ ಉದ್ಘಾಟನೆ ಮಾಡಿಸಿ ಎಂದು ಒತ್ತಾಯಿಸಿದೆ.

ಈ ಮಧ್ಯೆ ಮೈಸೂರು ಬಿಜೆಪಿ ಸಂಸದ ಹಾಗೂ ರಾಜವಂಶಸ್ಥರೂ ಆಗಿರುವ ಯದುವೀರ್ ಒಡೆಯರ್ ಅವರು, ದಸರಾ ಉದ್ಘಾಟಕರಾಗಿ ಬಾನು ಮುಷ್ತಾಕ್ ಅವರನ್ನು ಆಯ್ಕೆ ಮಾಡಿರುವ ಸರ್ಕಾರದ ನಿರ್ಧಾರವನ್ನು ಸ್ವಾಗತ ಮಾಡುತ್ತೇನೆ ಎಂದು ಹೇಳಿದ್ದಾರೆ.

ಇಂದು ಕೊಡಗಿನ ವಿರಾಜಪೇಟೆಯಲ್ಲಿ ಸುದ್ದಿಗಾರರೊಂದಿಗೆ ಮಾತಾನಾಡಿದ ಯದುವೀರ್ ಒಡೆಯರ್, ಬಾನು ಮುಷ್ತಾಕ್ ಅವರು ಖ್ಯಾತ ಬರಹಗಾರ್ತಿ, ಅಂತರಾಷ್ಟ್ರೀಯ ಮಟ್ಟದಲ್ಲಿ ಸಾಹಿತ್ಯ ಪ್ರಶಸ್ತಿ ಸ್ವೀಕರಿಸಿದ್ದಾರೆ. ಜೊತೆಗೆ ಸಾಮಾಜಿಕ ಹೋರಾಟದಲ್ಲಿ ಗುರುತಿಸಿಕೊಂಡಿದ್ದಾರೆ. ಮುಸ್ಲಿಂ ಮಹಿಳೆಯರಿಗೆ ಸಮಾನವಾದ ಹಕ್ಕು ಕೋಡಬೇಕು. ಮಸೀದಿಗಳಿಗೆ ಅವಕಾಶ ಕೋಡಬೇಕು ಎಂದು ಬಾನು ಮುಷ್ತಾಕ್ ಅವರು ಈ ಹಿಂದೆ ಸಾಮಾಜಿಕ ಬಹಿಷ್ಕಾರವನ್ನು ಕೂಡ ಎದುರಿಸಿದ್ದರು ಎಂದಿದ್ದಾರೆ. ಕನ್ನಡ ಭಾಷೆ ಮತ್ತು ಸಾಹಿತ್ಯಕ್ಕೆ ಬಾನು ಮುಷ್ತಾಕ್ ನೀಡಿದ ಕೊಡುಗೆ ಅಪಾರವಾಗಿದ್ದು, ನಾವು ಅದನ್ನು ಗೌರವಿಸುತ್ತವೆ. ಹಾಗಾಗಿ ರಾಜ್ಯ ಸರ್ಕಾರದ ಆಯ್ಕೆ ನಿರ್ಧಾರವನ್ನು ಸ್ವಾಗತ ಮಾಡುತ್ತೇನೆ ಎಂದಿದ್ದಾರೆ.

ಆದರೆ ಈ ವರ್ಷದ ದಸರಾ ಆಚರಣೆಯ ಮುಖ್ಯ ಅತಿಥಿಯಾಗಿ ಉದ್ಘಾಟಿಸುವ ಮೊದಲು ಅವರು ತಾಯಿ ಭುವನೇಶ್ವರಿ ಮತ್ತು ತಾಯಿ ಚಾಮುಂಡೇಶ್ವರಿಯ ಬಗ್ಗೆ ಅವರ ಗೌರವವನ್ನು ಶ್ರೀಮತಿ ಭಾನು ಮುಷ್ತಾಕ್ ಸ್ಪಷ್ಟಪಡಿಸುವುದು ಈ ಸಮಯದಲ್ಲಿ ಅತ್ಯಂತ ಅಗತ್ಯ ಎಂದು ನಂತರ ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದಾರೆ.

ಕಳೆದೆರಡು ದಿನಗಳಿಂದ ಬಿಜೆಪಿ ನಾಯಕರು ಬಾನು ಮುಷ್ತಾಕ್ ಅವರ ಆಯ್ಕೆಯನ್ನು ತೀವ್ರವಾಗಿ ವಿರೋಧಿಸಿಕೊಂಡು ಬರುತ್ತಿದ್ದಾರೆ. ಈ ಎಲ್ಲಾ ಬೆಳವಣಿಗೆ ನಡುವೆ ಯದುವೀರ್ ಒಡೆಯರ್ ಅವರ ಈ ಹೇಳಿಕೆ ಬಿಜೆಪಿಗೆ ತೀವ್ರ ಮುಖಭಂಗವನ್ನುಂಟು ಮಾಡಿದೆ.

## RSS ಗೀತೆ ಹಾಡಿದ್ದಕ್ಕೆ ಡಿಕೆಶಿ ಕ್ಷಮೆ ಕೇಳಬೇಕು: ಬಿ.ಕೆ ಹರಿಪ್ರಸಾದ್

### ಡಿಕೆಶಿ RSS ಸಂಘದ ಗೀತೆ ಹಾಡಿದ್ದು ಪರ-ವಿರೋಧ ಹೇಳಿಕೆಗಳಿಗೆ ಕಾರಣವಾಗುತ್ತಿದೆ

ನವದೆಹಲಿ: ವಿಧಾನಸಭೆಯಲ್ಲಿ ಡಿಸಿಎಂ ಡಿಕೆ ಶಿವಕುಮಾರ್ RSS ಸಂಘದ ಗೀತೆ ಹಾಡಿದ್ದು ಇದೀಗ ಪರ-ವಿರೋಧ ಹೇಳಿಕೆಗಳಿಗೆ ಕಾರಣವಾಗುತ್ತಿದೆ. ಒಂದು ಕಡೆ ಬಿಜೆಪಿಗರು ಇದನ್ನು ಸಮರ್ಥಿಸಿಕೊಳ್ಳುತ್ತಿದ್ದರೆ ಮತ್ತೊಂದೆಡೆ ಕಾಂಗ್ರೆಸ್ ನಲ್ಲಿ ಆಕ್ರೋಶ ಭುಗಿಲೆದ್ದಿದೆ. ವಿಧಾನಸಭೆಯಲ್ಲಿ ಡಿಕೆ ಶಿವಕುಮಾರ್ ಕೆಪಿಸಿಸಿ ಅಧ್ಯಕ್ಷರಾಗಿ RSS ಸಂಘದ ಗೀತೆ ಹಾಡಿದ್ದು ತಪ್ಪು ಅವರು ಕ್ಷಮೆ ಕೇಳಬೇಕು





ಎಂದು ಕಾಂಗ್ರೆಸ್ ನಾಯಕ ಬಿಕೆ ಹರಿಪ್ರಸಾದ್ ಹೇಳಿದ್ದಾರೆ.

ನವದೆಹಲಿಯಲ್ಲಿ ಮಾತನಾಡಿದ ಹರಿಪ್ರಸಾದ್, ಉಪ ಮುಖ್ಯಮಂತ್ರಿಗಳಾಗಿ ಅದನ್ನು ಹಾಡಿದ್ದರೆ ತಕರಾರಿಲ್ಲ. ಆದರೆ ಕೆಪಿಸಿಸಿ ಅಧ್ಯಕ್ಷರಾಗಿ ಆರ್‌ಎಸ್‌ಎಸ್ ಗೀತೆ ಹಾಡಿದ್ದರೆ ಕ್ಷಮೆ ಕೇಳಬೇಕು ಎಂದು ಆಗ್ರಹಿಸಿದ್ದಾರೆ. ಆರ್‌ಎಸ್‌ಎಸ್ ಅನ್ನು ಈ ದೇಶದಲ್ಲಿ ಮೂರು ಬಾರಿ ಈಗಾಗಲೇ ನಿಷೇಧ ಮಾಡಿದ್ದಾರೆ. ಡಿಕೆ ಶಿವಕುಮಾರ್ ಉಪ ಮುಖ್ಯಮಂತ್ರಿಗಳಾಗಿ ಸಂಘದ ಪ್ರಾರ್ಥನೆ ಮಾಡಿದರೆ ನಮ್ಮದೇನು ಅಭ್ಯಂತರವಿಲ್ಲ ಎಂದರು. ಕಾರಣ ಸರ್ಕಾರ ಎಂಬುದು ಒಂದು ಪಕ್ಷದ್ದಲ್ಲ. ಇಡೀ ಏಳು ಕೋಟಿ ಕರ್ನಾಟಕ ಜನತೆಯ ಸರ್ಕಾರ ಎಂದು ಹೇಳಿದ್ದಾರೆ.

ಮಹಾತ್ಮ ಗಾಂಧಿಯವರನ್ನು ಹತ್ಯೆ ಮಾಡಿದ ಸಂಘಟನೆ ಅದು. ಆ ಸಂಘಟನೆಯ ಪ್ರಾರ್ಥನೆ ಮಾಡುವುದು ಸರಿಯಲ್ಲ. ಕಾಂಗ್ರೆಸ್ ಅಧ್ಯಕ್ಷರಾಗಿ ಮಾಡಿದ್ದರೆ ಅವರು ಕ್ಷಮೆ ಕೇಳಬೇಕಾಗುತ್ತದೆ ಎಂದು ಹರಿಪ್ರಸಾದ್ ಹೇಳಿದರು.

ಸುದ್ದಿ ಮತ್ತು ಜಾಹೀರಾತುಗಳಿಗಾಗಿ ಸಂಪರ್ಕಿಸಿ:
9538786812 / 9880655634

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

ಡಿಜಿಟಲ್ ವಾರ್ತೆ

# ದಾಳಿ ವೇಳೆ ಗೋಡೆ ಹಾರಿ ಓಡಿ ಹೋದ ಶಾಸಕ

## ಪಶ್ಚಿಮ ಬಂಗಾಳದಲ್ಲಿ ಶಿಕ್ಷಕರ ನೇಮಕಾತಿ ಹಗರಣದ ತನಿಖೆ ವೇಳೆ ನಡೆದ ಹೈಡ್ರಾಮಾ

ಪಶ್ಚಿಮ ಬಂಗಾಳದಲ್ಲಿ ಶಿಕ್ಷಕರ ನೇಮಕಾತಿ ಹಗರಣದ ತನಿಖೆ ನಡೆಸುತ್ತಿರುವ ಜಾರಿ ನಿರ್ದೇಶನಾಲಯ (ED) ಇಂದು ತೃಣಮೂಲ ಕಾಂಗ್ರೆಸ್ (TMC) ಶಾಸಕ ಜೀವನ್ ಕೃಷ್ಣ ಸಹಾ ಎಂಬಾತನನ್ನು ಬಂಧಿಸಿದೆ. ಇಡಿ ತಂಡವು ಮುರ್ಷಿದಾಬಾದ್ ಜಿಲ್ಲೆಯ ಬುರ್ವಾನ್‌ನಲ್ಲಿರುವ ಅವರ ಮನೆ ಮೇಲೆ ದಾಳಿ ಮಾಡಲು ತೆರಳಿದ್ದಾಗ ಶಾಸಕರು ಗೋಡೆ ಹಾರಿ ತಪ್ಪಿಸಿಕೊಳ್ಳಲು ಪ್ರಯತ್ನಿಸಿದರು. ಈ ಸಮಯದಲ್ಲಿ ಇಡಿ ತಂಡವು ಹತ್ತಿರದ ಹೊಲದಿಂದ ಓಡಿಹೋಗಿ ಅವರನ್ನು ಹಿಡಿದಿದೆ.

ಇಡಿ ಅಧಿಕಾರಿಗಳ ಪ್ರಕಾರ, ಕೃಷ್ಣ ಸಹಾ ಓಡಿಹೋಗುತ್ತಿದ್ದಾಗ ಹೊಲದಲ್ಲಿ ಸಿಕ್ಕಿಬಿದ್ದಿದ್ದಾರೆ. ಆ ಸಮಯದಲ್ಲಿ ಅವರ ಬಟ್ಟೆ ಮತ್ತು ದೇಹದ ಮೇಲೆ ಮಣ್ಣು ಇತ್ತು. ದಾಳಿಯ ಸಮಯದಲ್ಲಿ ಶಾಸಕರು ಸಾಕ್ಷ್ಯವನ್ನು ನಾಶಮಾಡಲು ಪ್ರಯತ್ನಿಸಿದರು. ಅವರ ಮೊಬೈಲ್ ಫೋನ್ ಅನ್ನು ಮನೆಯ ಹತ್ತಿರದ ಬಾವಿಗೆ ಎಸೆದಿದ್ದರು. ಆದಾಗ್ಯೂ, ಇಡಿ ತಂಡವು ಅವರ ಎರಡೂ ಮೊಬೈಲ್ ಫೋನ್‌ಗಳನ್ನು ಬಾವಿಯಿಂದ ವಶಪಡಿಸಿಕೊಂಡಿದೆ. ಈಗ ಅವುಗಳನ್ನು ವಿಧಿವಿಜ್ಞಾನ ತನಿಖೆಗೆ ಕಳುಹಿಸಲಾಗಿದೆ ಎಂದರು.

ನೇಮಕಾತಿ ಹಗರಣಕ್ಕೆ ಸಂಬಂಧಿಸಿದ ವಹಿವಾಟುಗಳನ್ನು ಬಹಿರಂಗಪಡಿಸಿದ ಬಿರ್ಭೂಮ್ ಜಿಲ್ಲೆಯ ವ್ಯಕ್ತಿಯಿಂದ ಪಡೆದ ಮಾಹಿತಿಯ ಆಧಾರದ ಮೇಲೆ ದಾಳಿ ನಡೆಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಅದೇ ವ್ಯಕ್ತಿ ಇಡಿ ತಂಡದೊಂದಿಗೆ ಟಿಎಂಸಿ ಶಾಸಕರ ಮನೆಯನ್ನು ತಲುಪಿದ್ದರು.

ಇಡಿ ತಂಡವು ಪ್ರಸ್ತುತ ಮುರ್ಷಿದಾಬಾದ್‌ನಲ್ಲಿರುವ ಶಾಸಕ ಕೃಷ್ಣ ಸಹಾ ಅವರನಿವಾಸದಮೇಲೆ,ರಘುನಾಥಗಂಜ್‌ನಲ್ಲಿರುವ ಅವರ ಅತ್ತೆಯ ಮನೆ ಮತ್ತು ಬಿರ್ಭೂಮ್ ಜಿಲ್ಲೆಯ ಅವರ ಆಪ್ತ ಸಹಾಯಕನ ಮನೆಯ ಮೇಲೆ ದಾಳಿ ನಡೆಸುತ್ತಿದೆ. ಶಾಸಕರನ್ನು ನಿರಂತರವಾಗಿ ವಿಚಾರಣೆ ನಡೆಸಲಾಗುತ್ತಿದೆ. ಅವರನ್ನು ಕೋಲ್ಕತ್ತಾಗೆ ಕರೆದೊಯ್ಯಲಾಗುತ್ತಿದೆ. ಅಲ್ಲಿ ಅವರನ್ನು ಇಡಿ ನ್ಯಾಯಾಲಯಕ್ಕೆ ಹಾಜರುಪಡಿಸಲಾಗುವುದು ಎಂದು ಸಂಸ್ಥೆ ತಿಳಿಸಿದೆ.

ಈ ಪ್ರಕರಣದಲ್ಲಿ ಸಹಾ ಮತ್ತು ಅವರ ಕುಟುಂಬವನ್ನು ಈ ಹಿಂದೆಯೂ ವಿಚಾರಣೆಗೆ ಒಳಪಡಿಸಲಾಗಿತ್ತು. ಇಡಿ ಅವರ ಪತ್ನಿಯನ್ನು ಸಹ ವಿಚಾರಣೆ ನಡೆಸಿತ್ತು. ಅದೇ ಸಮಯದಲ್ಲಿ, ಶಿಕ್ಷಕರ ನೇಮಕಾತಿ ಹಗರಣದಲ್ಲಿ ಅಕ್ರಮಗಳ ಆರೋಪದ ಮೇಲೆ ಸಿಬಿಐ ಏಪ್ರಿಲ್ 2023 ರಲ್ಲಿ ಟಿಎಂಸಿ ಶಾಸಕನನ್ನು ಬಂಧಿಸಿತು. ಅವರು ಮೇ 2023 ರಲ್ಲಿ ಜಾಮೀನು ಪಡೆದರು. ಶಿಕ್ಷಕರ ನೇಮಕಾತಿ ಹಗರಣದಲ್ಲಿ, ಹಣ ವರ್ಗಾವಣೆಯ ಅಂಶಗಳನ್ನು ಇಡಿ ತನಿಖೆ ನಡೆಸುತ್ತಿದ್ದರೆ, ಸಿಬಿಐ ಕ್ರಿಮಿನಲ್ ಸಂಪರ್ಕವನ್ನು ತನಿಖೆ ಮಾಡುತ್ತಿದೆ.

# ನಾವು ಮಾತಾಡಿದ್ರೆ ತಪ್ಪು ಅವರು ಏನ್ ಬೇಕಾದ್ರೂ ಮಾಡಬಹುದ?



ತುಮಕೂರು: ಅವರು ಆರ್‌ಎಸ್‌ಎಸ್ ಗೀತೆ ಹಾಡಬಹುದು, ಖಾಸಗಿ ಕಾರ್ಯಕ್ರಮದಲ್ಲಿ ಬಿಜೆಪಿ ನಾಯಕ ಅಮಿತ್ ಶಾ ಜತೆಗೆ ವೇದಿಕೆ ಹಂಚಿಕೊಳ್ಳಬಹುದು, ಏನು ಬೇಕಾದರೂ ಮಾಡಬಹುದು. ನಾವು ಏನೂ ಮಾತಾಡುವಂತಿಲ್ಲ ಎಂದು ಮಾಜಿ ಸಚಿವ ಕೆ.ಎನ್. ರಾಜಣ್ಣ ಉಪಮುಖ್ಯಮಂತ್ರಿ, ಡಿ.ಕೆ.ಶಿವಕುಮಾರ್ ವಿರುದ್ಧ ಕಿಡಿಕಾರಿದ್ದಾರೆ.

ಸುದ್ದಿಗಾರರ ಜತೆ ಮಾತನಾಡಿದ ಕೆಎನ್ ರಾಜಣ್ಣ, ಡಿ.ಕೆ.ಶಿವಕುಮಾರ್ ಅಧಿವೇಶನದಲ್ಲಿ ಆರ್‌ಎಸ್‌ಎಸ್ ಗೀತೆ ಹಾಡಿದ ಬಗ್ಗೆ ಪ್ರತಿಕ್ರಿಯಿಸಿದರು. ಪ್ರಯಾಗ್‌ರಾಜ್‌ನ ಗಂಗೆಯಲ್ಲಿ

## ಡಿಕೆ ಶಿವಕುಮಾರ್ ವಿರುದ್ಧ ನೇರಾ-ನೇರಾ ಆರೋಪ ಮಾಡಿದ ಕೆಎನ್ ರಾಜಣ್ಣ

ಸ್ನಾನ ಮಾಡಿದ ಮಾತ್ರಕ್ಕೆ ಬಡತನ ನಿವಾರಣೆಯಾಗುವುದಿಲ್ಲ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದ್ದರು. ಇದರ ನಂತರವೂ ಡಿ.ಕೆ.ಶಿವಕುಮಾರ್ ಹೋಗಿ ಪುಣ್ಯ ಸ್ನಾನ ಮಾಡಿದರು.

ಆರೆಸ್ಸೆಸ್ ಕಾಂಗ್ರೆಸ್ ಸಿದ್ಧಾಂತಕ್ಕೆ ತದ್ವಿರುದ್ಧ ಎಂದು ಗೊತ್ತಿದ್ದರೂ ಸದನದಲ್ಲಿ ಆರೆಸ್ಸೆಸ್ ಗೀತೆ ಹಾಡುತ್ತಾರೆ. ಸದನಕ್ಕೆ ಸಂಬಂಧವೇ ಇಲ್ಲದ ವ್ಯಕ್ತಿ ಶಾಸಕರ ಸಭೆ ನಡೆಸಬಹುದು, ನಾವು ನಡೆಸಿದರ ಅಪರಾಧ. ಈ ಎಲ್ಲಾ ವೈರುಧ್ಯಗಳಿಗೆ ಸೂಕ್ತ ಸಮಯದಲ್ಲಿ ಉತ್ತರ ನೀಡಲಿದ್ದೇನೆ ಎಂದು ಅಸಮಾಧಾನ ಹೊರಹಾಕಿದರು.

ಕೋಮುವಾದಿಗಳಿಗೆ ಬೆಂಬಲವಾಗಿರುವ ಮುಖೇಶ್ ಅಂಬಾನಿ ಮಗನ ಮದುವೆಗೆ ಹೋಗುವುದಿಲ್ಲ ಎಂದು ಸ್ವತಃ ರಾಹುಲ್ ಗಾಂಧಿ ಅವರು ಹೇಳಿದ ನಂತರವೂ ಅಂಬಾನಿ ಮಗನ ಮದುವೆ ಹೋಗುತ್ತಾರೆ ,ಅಂಬಾನಿ ಮಗನ ಮದುವೆಯ ಆಮಂತ್ರಣವನ್ನು ಕಾಂಗ್ರೆಸ್ ನಾಯಕ ರಾಹುಲ್‌ಗಾಂಧಿ ಸ್ವೀಕರಿಸುವುದಿಲ್ಲ. ಅಂತಹ ಮದುವೆಗೆ ಇವರು (ಡಿಕೆಶಿ) ಕುಟುಂಬ ಸಮೇತ ಹೋಗುತ್ತಾರೆ ಎಂದು ಕಿಡಿಕಾರಿದರು. ನಾವು ಯಾವುದೇ ಶಾಸಕರ, ಮಂತ್ರಿಗಳ ಸಭೆ ಕರೆಯುವ ಹಾಗಿಲ್ಲ. ಬೇರೆಯವರು ಕರೆಯಬಹುದು, ಮಾತಾಡಬಹುದು ಎಂದರು.

# ರಾಹುಲ್ ಗಾಂಧಿ 'ಮತ ಅಧಿಕಾರ ಯಾತ್ರೆ' ದೇಶದ ಪಾಲಿನ ಗೇಮ್ ಚೇಂಜರ್: ಡಿ.ಕೆ ಶಿವಕುಮಾರ್

ಬೆಂಗಳೂರು: ರಾಹುಲ್ ಗಾಂಧಿ ಅವರು ಕರ್ನಾಟಕದಿಂದ ಬಿಹಾರದವರೆಗೆ ಧ್ವನಿ ಎತ್ತಿರುವ



ವಿಚಾರದ ಬಗ್ಗೆ ಇಡೀ ದೇಶವೇ ಚರ್ಚಿಸುತ್ತಿದೆ. ಅವರ ನೇತೃತ್ವದಲ್ಲಿ ಬಿಹಾರದಲ್ಲಿ ನಡೆಯುತ್ತಿರುವ 'ವೋಟ್ ಅಧಿಕಾರ ಯಾತ್ರೆ' ದೇಶದ ಪಾಲಿಗೆ ಗೇಮ್ ಚೇಂಜರ್ ಆಗಲಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಭಾನುವಾರ ಹೇಳಿದರು. ರಾಹುಲ್ ಗಾಂಧಿ ನೇತೃತ್ವದಲ್ಲಿ ಬಿಹಾರದಲ್ಲಿ ನಡೆಯುತ್ತಿರುವ 'ಮತ ಅಧಿಕಾರ ಯಾತ್ರೆ'ಯಲ್ಲಿ ಭಾಗವಹಿಸಿರುವ ಅವರು, ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದರು.

ಬಿಹಾರದಲ್ಲಿ ನಡೆದ ಯಾತ್ರೆ ದೇಶದ ಪಾಲಿಗೆ ದೊಡ್ಡ ಗೇಮ್ ಚೇಂಜರ್ ಆಗಲಿದೆ. ರಾಹುಲ್ ಗಾಂಧಿ ಅವರು ತಮಗಾಗಿ ಈ ಹೋರಾಟ ಮಾಡುತ್ತಿಲ್ಲ. ಸಂವಿಧಾನದತ್ತವಾಗಿ ದೇಶದ ಜನಸಾಮಾನ್ಯರಿಗೆ ಸಿಕ್ಕಿರುವ ಹಕ್ಕಿನ ರಕ್ಷಣೆಗೆ ಹೋರಾಡುತ್ತಿದ್ದಾರೆ. ಕರ್ನಾಟಕದಲ್ಲಿ ಏನಾಗಿದೆ ಎನ್ನುವುದು ನನಗೆ ಗೊತ್ತಿದೆ. ಮತದಾರರು ತಮ್ಮ ಹಕ್ಕನ್ನು ಪಡೆಯಲು ಅವಕಾಶ ಮಾಡಿಕೊಟ್ಟಿರುವ ಸುಪ್ರೀಂ ಕೋರ್ಟ್ ಬಗ್ಗೆ ಹೆಮ್ಮೆ ಇದೆ ಎಂದು ಹೇಳಿದರು.

ಬಿಹಾರದ ಜನ ಬದಲಾವಣೆ ಬಯಸಿದ್ದಾರೆ. ಇಲ್ಲಿನ ಯುವಕರು ಕೂಡ ಬೀದಿಗಿಳಿದು ಮಹಾಘಟಬಂಧನಕ್ಕೆ ಬೆಂಬಲ ನೀಡುತ್ತಿದ್ದಾರೆ. ನಮ್ಮ ಮಹಾಘಟಬಂಧನ ನೀಡಿರುವ ಗ್ಯಾರಂಟಿಗಳು ಜನರಿಗೆ ನೆರವಾಗಲಿದ್ದು , ನಾವು ಕೊಟ್ಟ ಮಾತನ್ನು ಉಳಿಸಿಕೊಳ್ಳುತ್ತೇವೆ. ಕಳೆದ ಬಾರಿ ಮಹಾಘಟಬಂಧನ ಅಲ್ಪಅಂತರದಲ್ಲಿ ಸೋತಿತ್ತು. ಈ ಬಾರಿ ಗೆದ್ದೇ ಗೆಲ್ಲುತ್ತೇವೆ' ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಇದೇ ವೇಳೆ ಕರ್ನಾಟಕದಿಂದ ಪ್ರಾರಂಭವಾದ ರಾಹುಲ್ ಅವರ ರ್ಯಾಲಿಯ ಬಗ್ಗೆ ವಿವರಿಸಿದ ಅವರು, ಬಿಹಾರದ ಯುವಕರು ತೋರಿಸಿದ ಪ್ರತಿಕ್ರಿಯೆ ಅದ್ಭುತವಾಗಿದೆ ಎಂದು ಹೇಳಿದರು. ಬಿಹಾರದ ಯುವಕರಿಗೆ ಬದಲಾವಣೆ ಬೇಕು ಮತ್ತು ಆ ಬದಲಾವಣೆ ಮಹಾಘಟ ಬಂಧನಕ್ಕಾಗಿ ಆಗಿದೆ... ಕರ್ನಾಟಕದಲ್ಲಿಯೂ ಈ ರೀತಿಯ ಪ್ರತಿಕ್ರಿಯೆಯನ್ನು ನೋಡಲಿಲ್ಲ. ಬಿಹಾರದ ಯುವಕರಿಗೆ ನಾನು ಧನ್ಯವಾದ ಹೇಳುತ್ತೇನೆ. ಕಳೆದ ಬಾರಿ, ಇಂಡಿಯಾ ಕೂಡ ಕ್ಷಣಾರ್ಧದಲ್ಲಿ ಅವಕಾಶವನ್ನು ಕಳೆದುಕೊಂಡಿತು, ಆದರೆ, ಈ ಬಾರಿ ನಾವು ಸರ್ಕಾರ ರಚಿಸುತ್ತೇವೆ ಎಂದು ತಿಳಿಸಿದರು.

# ಬೆಂಗಳೂರು ಸೆಂಟ್ರಲ್ ಕ್ಷೇತ್ರದ ಮತ ಕಳ್ಳತನ ಎಲ್ಲರಿಗೂ ಎಚ್ಚರಿಕೆಯ ಗಂಟೆಯಾಗಿದೆ: ಮನ್ಸೂರ್ ಅಲಿ ಖಾನ್

## ನಿಗಳನ್ನು ಅಳಿಸಿಹಾಕುವ ವ್ಯವಸ್ಥೆಯ ಬಗ್ಗೆ ನಾನು ಮಾತನಾಡುತ್ತಿದ್ದೇನೆ.

ಬೆಂಗಳೂರು: ಬೆಂಗಳೂರು ಕೇಂದ್ರ ಕ್ಷೇತ್ರದ ಮಹದೇವಪುರದಲ್ಲಿ ಮತ ಕಳ್ಳತನ ನಡೆದಿರುವುದು ಎಲ್ಲರಿಗೂ ಎಚ್ಚರಿಕೆಯ ಗಂಟೆಯಾಗಿದೆ ಎಂದು ಚುನಾವಣೆಯಲ್ಲಿ ಪರಾಜಯಗೊಂಡ ಕಾಂಗ್ರೆಸ್ ಅಭ್ಯರ್ಥಿ ಮನ್ಸೂರ್ ಅಲಿ ಖಾನ್ ಅವರು ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಂಗಳೂರು ಕೇಂದ್ರ ಕ್ಷೇತ್ರದಲ್ಲಷ್ಟೇ ಅಲ್ಲ, ಹಲವೆಡೆ ನಡೆದಿದೆ. ತಮ್ಮ ಮತದಾನದ ಹಕ್ಕನ್ನು ಗೌರವಿಸುವ ಪ್ರತಿಯೊಬ್ಬ ಭಾರತೀಯನಿಗೂ ಇದು ಎಚ್ಚರಿಕೆ ಗಂಟೆಯಾಗಿದೆ ಎಂದು ಹೇಳಿದ್ದಾರೆ.

ಒಬ್ಬ ವ್ಯಕ್ತಿಯ ಪ್ರಚಾರ ಅಥವಾ ಒಬ್ಬ ಅಭ್ಯರ್ಥಿಯ ಬಗ್ಗೆ ನಾನು ಮಾತನಾಡುತ್ತಿಲ್ಲ. ಧ್ವನಿಗಳನ್ನು ಅಳಿಸಿಹಾಕುವ ವ್ಯವಸ್ಥೆಯ ಬಗ್ಗೆ ನಾನು ಮಾತನಾಡುತ್ತಿದ್ದೇನೆ. ದೇಶಕ್ಕೆ ಇಂದು ರೀತಿಯ ಪರೀಕ್ಷೆಯ ಪ್ರಕರಣವಾಗಿದೆ. ಈಗಲಾದರೂ ನಾವು ಕಾರ್ಯಪ್ರವೃತ್ತರಾಗದಿದ್ದರೆ, ಎಲ್ಲೆಡೆ ಈ ವಿಷ ಪಸರುತ್ತದೆ ಎಂದು ತಿಳಿಸಿದರು.

ಮನ್ಸೂರ್ ಅಲಿ ಖಾನ್ ಅವರು ಈ ಹೇಳಿಕೆ ನೀಡಿದ ಕೆಲವೇ ಕ್ಷಣಗಳಲ್ಲಿ ಸಾಮಾಜಿಕ ಜಾಲತಾಣಗಳಲ್ಲಿ #VoteChori ಹ್ಯಾಷ್ ಟ್ಯಾಗ್ ಟ್ರೆಂಡಿಂಗ್ ಶುರುವಾಯಿತು. ಬಿಹಾರ ವಿಧಾನಸಭಾ ಚುನಾವಣೆಗೆ ಇನ್ನು ಕೆಲವೇ ದಿನಗಳು ಬಾಕಿ ಉಳಿದಿದ್ದು , ಈ ನಡುವಲ್ಲೇ ಮನ್ಸೂರ್ ಅಲಿ ಖಾನ್ ಅವರು ನೀಡಿರುವ ಹೇಳಿಕೆ ಮಹತ್ವ ಪಡೆದುಕೊಂಡಿದೆ.

# ಕಾಮನ್ ವೆಲ್ತ್ ಗೇಮ್ಸ್ 2030: ಆತಿಥ್ಯ ವಹಿಸಲು ಭಾರತ ಬಿಡ್, IOA ಒಪ್ಪಿಗೆ

ನವದೆಹಲಿ: 2030 ರ ಕಾಮನ್ ವೆಲ್ತ್ ಕ್ರೀಡಾಕೂಟದ ಆತಿಥ್ಯ ವಹಿಸಲು ಭಾರತ ಬಿಡ್ ಸಲ್ಲಿಸುವುದಕ್ಕೆ ಭಾರತೀಯ ಒಲಿಂಪಿಕ್ ಸಂಸ್ಥೆ (IOA) ವಿಶೇಷ ಸಾಮಾನ್ಯ ಸಭೆಯಲ್ಲಿ ಬುಧವಾರ ಒಪ್ಪಿಗೆ ನೀಡಲಾಗಿದೆ.

ಗುಜರಾತ್ ನ ಅಹಮದಾಬಾದ್ ನಲ್ಲಿ 20230ರ ಕಾಮನ್ ವೆಲ್ತ್ ಕ್ರೀಡಾಕೂಟ ಆಯೋಜನೆಗೆ ಉತ್ಸುಕವಾಗಿರುವುದಾಗಿ ಭಾರತ ಈಗಾಗಲೇ ಅರ್ಜಿ ಸಲ್ಲಿಸಿದೆ. ಆದರೆ ಆಗಸ್ಟ್ 31 ರೊಳಗೆ ಅಂತಿಮ ಬಿಡ್ ಗೆ ಪ್ರಸ್ತಾವನೆ ಸಲ್ಲಿಸಬೇಕಾಗಿದೆ.

ಭಾರತವು 2010ರಲ್ಲಿ ದೆಹಲಿಯಲ್ಲಿ ಈ ಕ್ರೀಡಾಕೂಟವನ್ನು ಆಯೋಜಿಸಿತ್ತು. ಕ್ರೀಡಾಕೂಟ ಆಯೋಜಿಸಲು ಆರಂಭದಲ್ಲಿ ಆಸಕ್ತಿ ತೋರಿದ್ದ ಕೆನಡಾ ಈಗಾಗಲೇ ಬಿಡ್ ನಿಂದ ಹಿಂದೆ ಸರಿದಿದ್ದು , ಭಾರತಕ್ಕೆ ಅವಕಾಶ ದೊರೆಯುವ ಸಾಧ್ಯತೆ ಹೆಚ್ಚಾಗಿದೆ.

# ಬೆಂಗಳೂರು: ಲ್ಯಾವೆಲ್ಲೆ ರಸ್ತೆಯ 5 ಅಂಗಡಿಗಳಲ್ಲಿ ದರೋಡೆ: ಚುರುಕಾದ ಪತ್ತೆಕಾರ್ಯ

ಬೆಂಗಳೂರು: ಕೇಂದ್ರ ವಿಭಾಗದ ಉಪ ಪೊಲೀಸ್ ಆಯುಕ್ತರ (ಡಿಸಿಪಿ) ಕಚೇರಿಗೆ ಸಮೀಪವಿರುವ ಲ್ಯಾವೆಲ್ಲೆ ರಸ್ತೆಯಲ್ಲಿರುವ ಐದು ಅಂಗಡಿಗಳನ್ನು ಗುರಿಯಾಗಿರಿಸಿಕೊಂಡಿರುವ ಕಳ್ಳರ ಗ್ಯಾಂಗ್ ವೊಂದು, ಬೆಲೆಬಾಳುವ ವಸ್ತುಗಳು ಹಾಗೂ ನಗದನ್ನು ದೋಚಿ ಪರಾರಿಯಾಗುತ್ತಿದ್ದಾರೆ.

ಗುರುವಾರ ಬೆಳಗಿನ ಜಾವ 3.30 ರಿಂದ 5.30 ರ ನಡುವೆ ಈ ಕಳ್ಳತನ ನಡೆದಿದ್ದು , ಎಲ್ಲಾ ಅಂಗಡಿಗಳ ಸಿಸಿಟಿವಿ ಕ್ಯಾಮೆರಾಗಳಲ್ಲಿ ಕಳ್ಳರ ಕೈಚಳಕ ಸೆರೆಯಾಗಿದೆ. ಐಆರ್'ಐಎಸ್ ಅರೋಮಾ ಬೂಟೀಕ್, ಲೂಯಿಸ್ ಫಿಲಿಪ್ ಶೋರೂಮ್, ಜೀನ್-ಕ್ಲೌಡ್ ಬಿಗುಯಿನ್ ಸಲೂನ್ & ಸ್ಪಾ, ಹಕಿಮ್ಸ್ ಆಲಿಮ್ ಸಲೂನ್ ಮತ್ತು ನೈಕಾ ಲಕ್ಸ್ ಕಾಸ್ಮೆಟಿಕ್ಸ್ ಅಂಗಡಿಗಳಲ್ಲಿ ಕಳ್ಳತನ ನಡೆದಿದೆ.

ಈ ಐದೂ ಅಂಗಡಿಗಳಲ್ಲಿ ನಡೆದಿರುವ ಕಳ್ಳತನದಲ್ಲಿ ಒಂದೇ ಗ್ಯಾಂಗ್ ಭಾಗಿಯಾಗಿರುವುದು ಸಿಸಿಟಿವಿ ದೃಶ್ಯಾವಳಿಗಳಿಂದ ತಿಳಿದುಬಂದಿದೆ. ಈ ಸಂಬಂಧ ಗುರುವಾರ ಎಲ್ಲಾ ಅಂಗಡಿಗಳ ವ್ಯವಸ್ಥಾಪಕರು ಕಬ್ಬನ್ ಪಾರ್ಕ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಆರೋಪಿಗಳು ಅಂಗಡಿಗಳ ಶಟರ್ ಬೀಗಗಳನ್ನು ಮುರಿದಿದ್ದು , ಗಾಜಿನ ಬಾಗಿಲುಗಳನ್ನು ಹೊಡೆದು ಹಾಕಿದ್ದಾರೆಂದು ತಿಳಿಸಿದ್ದಾರೆ.

ಆರೋಪಿಗಳು 20ರ ಹರೆಯದವರೆಂದು ಶಂಕಿಸಲಾಗಿದ್ದು , ಇಬ್ಬರೂ ರಾಡ್ ಗಳನ್ನು ಬಳಸಿ ಬೀಗಗಳನ್ನು ಒಡೆದಿರುವುದು ಸಿಸಿಟಿವಿ ದೃಶ್ಯಾವಳಿಗಳಲ್ಲಿ ಕಂಡು ಬಂದಿದೆ. ಒಳಗೆ ಹೋದ ಆರೋಪಿಗಳು ಕ್ಯಾಶ್ ಕೌಂಟರ್ ನತ್ತ ತೆರಳಿ, ಹಣ ಹಾಗೂ ಬೆಲೆ ಬಾಳುವ ವಸ್ತುಗಳನ್ನು ಕದ್ದೊಯ್ದಿದ್ದಾರೆ. ಆರೋಪಿಗಳು ಅಂಗಡಿಗಳು ತೆರೆಯುವ ಹಾಗೂ ಮುಚ್ಚುವ ಸಮಯವನ್ನು ಗಮನಿಸಿದ್ದು , ನಂತರ ಕಳ್ಳತನ ಮಾಡಿದ್ದಾರೆ. ಇದೀಗ ಸುತ್ತಮುತ್ತಲಿನ ಸಿಸಿಟಿವಿಗಳಿಂದ ಆರೋಪಿಗಳ ಚಲನವಲನಗಳನ್ನು ಟ್ರ್ಯಾಕ್ ಮಾಡುತ್ತಿದ್ದೇವೆ. ಆರೋಪಿಗಳು ಒಟ್ಟು 1.13 ಲಕ್ಷ ರೂ. ಹಣವನ್ನು ದೋಚಿದ್ದಾರೆಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಪ್ರಕರಣ ಸಂಬಂಧ ಐದು ಎಫ್‌ಐಆರ್‌ಗಳು ದಾಖಲಾಗಿದ್ದು , ಕಳ್ಳತನ (ಬಿಎನ್‌ಎಸ್ 305) ಮತ್ತು ರಾತ್ರಿಯಲ್ಲಿ ಅಪರಾಧ ಮಾಡಲು ಒಳನುಗ್ಗುವಿಕೆ (ಬಿಎನ್‌ಎಸ್ 331(4)) ಪ್ರಕರಣ ದಾಖಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

ಸುದ್ದಿ ಮತ್ತು ಜಾಹೀರಾತುಗಳಿಗಾಗಿ ಸಂಪರ್ಕಿಸಿ:
9538786812 / 9880655634

# SC, ST ದೌರ್ಜನ್ಯ ಪ್ರಕರಣ: 60 ದಿನದಲ್ಲಿ ಚಾರ್ಜ್ ಶೀಟ್ ಸಲ್ಲಿಸುವಂತೆ ಅಧಿಕಾರಿಗಳಿಗೆ ಸಿಎಂ ಸೂಚನೆ

ಬೆಂಗಳೂರು: ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜನರ ಮೇಲಿನ ದೌರ್ಜನ್ಯ ಪ್ರಕರಣಗಳಲ್ಲಿ 60 ದಿನಗಳ ಒಳಗಾಗಿ ಚಾರ್ಜ್ ಶೀಟ್ ಅನ್ನು ನ್ಯಾಯಾಲಯಕ್ಕೆ ಸಲ್ಲಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೋಮವಾರ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಇಂದು ತಮ್ಮ ಅಧ್ಯಕ್ಷತೆಯಲ್ಲಿ ನಡೆದ ಪರಿಶಿಷ್ಟ ಜಾತಿ/ಪಂಗಡಗಳ ರಾಜ್ಯ ಮಟ್ಟದ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಯಲ್ಲಿ, ಕಳೆದ ಆರು ತಿಂಗಳಲ್ಲಿ ಶೇ.84 ರಷ್ಟು ಪ್ರಕರಣಗಳಲ್ಲಿ ಮಾತ್ರ ನಿಗದಿತ ಅವಧಿಯ ಒಳಗಾಗಿ ಆರೋಪ ಪಟ್ಟಿ ಸಲ್ಲಿಸಲಾಗಿದೆ. ಶೇ.100 ಪ್ರಕರಣಗಳಲ್ಲಿ 60ದಿನಗಳ ಒಳಗಾಗಿ ಕಡ್ಡಾಯವಾಗಿ ಆರೋಪ ಪಟ್ಟಿ ಸಲ್ಲಿಸಲು ಕ್ರಮ ಕೈಗೊಳ್ಳಬೇಕು ಎಂದು ಸಿಎಂ ಸಿದ್ದರಾಮಯ್ಯ ಅವರು ಈ ಸೂಚನೆ ನೀಡಿದ್ದಾರೆ.

"ಪೊಲೀಸರು ಇದರಲ್ಲಿ ಯಾವುದೇ ನೆಪ ಹೇಳಬಾರದು. ನ್ಯಾಯಾಲಯದಲ್ಲಿ 56 ಪ್ರಕರಣಗಳಲ್ಲಿ ತಡೆಯಾಜ್ಞೆ ಇದ್ದು, ಇದನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳಬೇಕು. ರಾಜ್ಯದಲ್ಲಿ ದೌರ್ಜನ್ಯ ಪ್ರಕರಣಗಳ ತ್ವರಿತ ವಿಚಾರಣೆಗಾಗಿ 11 ವಿಶೇಷ ನ್ಯಾಯಾಲಯಗಳನ್ನು ಸ್ಥಾಪಿಸಲಾಗಿದೆ. ಪ್ರಕರಣಗಳ ಸರಿಯಾದ ವಿಚಾರಣೆ ನಡೆಸಿ, ತ್ವರಿತವಾಗಿ ನ್ಯಾಯ ಒದಗಿಸಲು ಕ್ರಮ ಕೈಗೊಳ್ಳಬೇಕು. ಪ್ರಸ್ತುತ ಶಿಕ್ಷೆಯ ಪ್ರಮಾಣ ಶೇ.10ರಷ್ಟಿದ್ದು , ಇದು ಹೆಚ್ಚಾಗಬೇಕು. ಆರೋಪಿಗಳ ಜೊತೆ ಪೊಲೀಸರು ಶಾಮೀಲಾಗಿರುವುದು ಕಂಡು ಬಂದರೆ ಅಂತವರ



ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಸಿಎಂ ಎಚ್ಚರಿಕೆ ನೀಡಿದರು.

ಸುಳ್ಳು ಜಾತಿ ಪ್ರಮಾಣ ಪತ್ರ ಪ್ರಕರಣಗಳಲ್ಲಿ ಕಟ್ಟುನಿಟ್ಟಿನ ಕಾನೂನು ಕ್ರಮಗಳನ್ನು ಕೈಗೊಳ್ಳಬೇಕು. ನ್ಯಾಯಾಲಯಗಳಲ್ಲಿ ಸುಳ್ಳು ಜಾತಿ ಪ್ರಮಾಣ ಪತ್ರ ಪ್ರಕರಣಗಳ ಕುರಿತು ತೀರ್ಪು ಬಂದರೂ, ತೀರ್ಪು ಜಾರಿಗೆ ಯಾಕೆ ಬಾಕಿ ಇದೆ. ಪ್ರಸ್ತುತ ಸುಳ್ಳು ಜಾತಿ ಪ್ರಮಾಣ ಪತ್ರ ಸಾಬೀತಾಗಿರುವ 170 ಪ್ರಕರಣಗಳಿದ್ದು , ತಕ್ಷಣ ಕ್ರಮ ಕೈಗೊಳ್ಳಬೇಕು. ಸುಳ್ಳು ಜಾತಿ ಪ್ರಮಾಣ ಪತ್ರ ಪಡೆದು ಸರ್ಕಾರದ ಸೌಲಭ್ಯಗಳನ್ನು ಪಡೆದಿರುವುದು ಸಾಬೀತಾದರೆ ಅದನ್ನು ಮರಳಿ ಪಡೆಯಲು ಕ್ರಮ ಕೈಗೊಳ್ಳಬೇಕು. ಈ ಕುರಿತು ಇಲಾಖೆಗಳ ನಡುವೆ ಸಮನ್ವಯತೆ ಅಗತ್ಯವಿದ್ದು , ಸಮಗ್ರ ವರದಿಯನ್ನು ಸಲ್ಲಿಸಬೇಕು ಎಂದು ಸೂಚಿಸಿದರು. ದೌರ್ಜನ್ಯ ಪ್ರಕರಣಗಳಲ್ಲಿ ಅಂಗವೈಕಲ್ಯತೆ ಉಂಟಾದಲ್ಲಿ ನೀಡಲಾಗುವ ವೈದ್ಯಕೀಯ ಪರಿಹಾರದ ಮೊತ್ತವನ್ನು ಹೆಚ್ಚಿಸುವ ಕುರಿತು ಪರಿಶೀಲನೆ ಮಾಡಲಾಗುವುದು ಸಿಎಂ ತಿಳಿಸಿದರು. ರಾಜ್ಯದಲ್ಲಿ 33 ಡಿಸಿಆರ್‌ಇ ಪೊಲೀಸ್ ಠಾಣೆಗಳನ್ನು ತೆರೆಯಲಾಗಿದ್ದು , ಇಲ್ಲಿ ಸಿಬ್ಬಂದಿ ಕೊರತೆಯಿದ್ದರೆ ಭರ್ತಿ ಮಾಡಲು ಕ್ರಮ ಕೈಗೊಳ್ಳಬೇಕು. ಈ ಕುರಿತು ಸರ್ಕಾರಕ್ಕೆ ಸೂಕ್ತ ಪ್ರಸ್ತಾವನೆ ಸಲ್ಲಿಸಬೇಕು.

ದೌರ್ಜನ್ಯ ಪ್ರಕರಣಗಳಲ್ಲಿ ಪ್ರತಿ ದೂರು ದಾಖಲಿಸುವ ಪ್ರವೃತ್ತಿ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ. ಅಂತಹ ಪ್ರಕರಣಗಳಲ್ಲಿ ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲನೆ ನಡೆಸಿ ದೂರಿನಲ್ಲಿ ಸತ್ಯಾಂಶವಿದ್ದರೆ ಮಾತ್ರ ಎಫ್‌ಐಆರ್ ದಾಖಲಿಸಬೇಕು. ರಾಜ್ಯಾದ್ಯಂತ ದೇವದಾಸಿಯರ ಸಮೀಕ್ಷೆ ಕಾರ್ಯವನ್ನು ಈಗಾಗಲೇ ಆರಂಭಿಸಲಾಗಿದ್ದು , ಸಮೀಕ್ಷೆ ಪೂರ್ಣಗೊಂಡ ಬಳಿಕ ದೇವದಾಸಿಯರ ಪುನರ್ವಸತಿಗೆ ಹಾಗೂ ಈ ಪಿಡುಗನ್ನು ಸಂಪೂರ್ಣವಾಗಿ ತೊಲಗಿಸಲು ಯೋಜನೆ ಜಾರಿಗೊಳಿಸಲಾಗುವುದು. ವಿಶೇಷ ಅನುದಾನ ನೀಡುವ ಬಗ್ಗೆಯೂ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದರು.

ಇನ್ನು ಬಾಕಿಯಿರುವ ಬ್ಯಾಕ್‌ಲಾಗ್ ಹುದ್ದೆಗಳ ನೇಮಕಾತಿ ಕುರಿತು ಪರಿಶೀಲಿಸಿ ಕ್ರಮ ಕೈಗೊಳ್ಳಬೇಕು. ಬ್ಯಾಕ್‌ಲಾಗ್ ಹುದ್ದೆ ಭರ್ತಿ ವಿಷಯದಲ್ಲಿ ಯಾವುದೇ ರಾಜಿ ಇಲ್ಲ. ಸರ್ಕಾರ ದಲಿತರ ಪರವಾಗಿದ್ದು , ದಲಿತರಿಗೆ ಸೂಕ್ತ ನ್ಯಾಯ ಒದಗಿಸಲು ಅಡ್ಡಗಾಲು ಹಾಕುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

- 60 ದಿನಗಳಲ್ಲಿ ಚಾರ್ಜ್‌ಶೀಟ್ ಸಲ್ಲಿಕೆ ಕಡ್ಡಾಯ ಎಂದು ಸಿಎಂ ಆದೇಶ
- ಕೇವಲ 84% ಪ್ರಕರಣಗಳಲ್ಲಿ ಸಮಯಕ್ಕೆ ಚಾರ್ಜ್‌ಶೀಟ್ ಸಲ್ಲಿಕೆ ನಡೆದಿದೆ
- ತಡೆಯಾಜ್ಞೆ ಇರುವ 56 ಪ್ರಕರಣಗಳನ್ನು ತೆರವುಗೊಳಿಸಲು ಕ್ರಮ ಸೂಚನೆ
- ರಾಜ್ಯದಲ್ಲಿ ದೌರ್ಜನ್ಯ ವಿಚಾರಣೆಗೆ 11 ವಿಶೇಷ ನ್ಯಾಯಾಲಯ ಸ್ಥಾಪನೆ
- ಶಿಕ್ಷೆಯ ಪ್ರಮಾಣ ಕೇವಲ 10%, ಅದನ್ನು ಹೆಚ್ಚಿಸಲು ಕ್ರಮ ಅಗತ್ಯ
- ಪೊಲೀಸರ ಶಾಮೀಲಾತನ ಕಂಡರೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಚ್ಚರಿಕೆ
- ಸುಳ್ಳು ಜಾತಿ ಪ್ರಮಾಣ ಪತ್ರ ಪ್ರಕರಣಗಳಲ್ಲಿ ಕಟ್ಟುನಿಟ್ಟಿನ ಕ್ರಮ ಅಗತ್ಯ
- ಸುಳ್ಳು ಜಾತಿಯಿಂದ ಪಡೆದ ಸೌಲಭ್ಯ ವಾಪಸ್ ಪಡೆಯುವಂತೆ ಸೂಚನೆ
- ಇಲಾಖೆಗಳ ನಡುವೆ ಸಮನ್ವಯತೆ ಅಗತ್ಯ, ಸಮಗ್ರ ವರದಿ ಸಲ್ಲಿಕೆ
- ದೌರ್ಜನ್ಯದಲ್ಲಿ ಅಂಗವೈಕಲ್ಯ ಪರಿಹಾರ ಮೊತ್ತ ಹೆಚ್ಚಿಸುವ ಪರಿಶೀಲನೆ
- ರಾಜ್ಯದಲ್ಲಿ 33 ಡಿಸಿಆರ್‌ಇ ಠಾಣೆಗಳಲ್ಲಿ ಸಿಬ್ಬಂದಿ ಕೊರತೆ ಭರ್ತಿ
- ಪ್ರತಿ ದೂರು ಪರಿಶೀಲಿಸಿ ಬಳಿಕ ಮಾತ್ರ ಎಫ್‌ಐಆರ್ ದಾಖಲಿಸಿ
- ರಾಜ್ಯಾದ್ಯಂತ ದೇವದಾಸಿ ಸಮೀಕ್ಷೆ ಕಾರ್ಯ ಪ್ರಾರಂಭವಾಗಿದೆ ಈಗಾಗಲೇ
- ಸಮೀಕ್ಷೆ ಬಳಿಕ ದೇವದಾಸಿಯರ ಪುನರ್ವಸತಿ ಯೋಜನೆ ಜಾರಿಯಾಗಲಿದೆ
- ಬ್ಯಾಕ್‌ಲಾಗ್ ಹುದ್ದೆಗಳ ನೇಮಕಾತಿ ತ್ವರಿತಗೊಳಿಸಲು ಕ್ರಮ ಕೈಗೊಳ್ಳಬೇಕು
- ದಲಿತರಿಗೆ ಅಡ್ಡಗಾಲು ಹಾಕುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.